# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 100 (09)
ಸದಸ್ಯರ ಹೆಸರು : ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 15.07.2024.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನರಹಿತ ಖಾಸಗಿ ಶಾಲೆಗಳು ಸೂಕ್ತ ಸಮಯಕ್ಕೆ ನವೀಕರಣಗೊಳ್ಳದೇ ವಿದ್ಯಾರ್ಥಿಗಳಿಗೆ ಪೋಷಕರಿಗೆ ಸಾಕಷ್ಟು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಸರಿಯಾದ ಸಮಯಕ್ಕೆ ನವೀಕರಣ ಮಾಡಿಸಿಕೊಳ್ಳುವಂತೆ ಖಾಸಗಿ ಶಾಲೆಗಳಿಗೆ ನೀಡಲಾದ ಸೂಚನೆಗಳೇನು; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು) | ಬಂದಿದೆ.<br>• The Karnataka Educational Institutions (Recognition of Primary and Secondary Schools) Rules 1999ರ ನಿಯಮ 3 ರಂತೆ ನೋಂದಾಯಿತ ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳು ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ಅಂದರೆ, ಜುಲೈ ಮಾಹೆಯಿಂದ ಅಗಸ್ಟ್ 31 ರೊಳಗಾಗಿ ಮಾನ್ಯತೆ ಕೋರಿ ಸಕ್ಷಮ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಬೇಕಾಗುತ್ತದೆ. ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಲು ಆಡಳಿತ ಮಂಡಳಿಯು ಒಂದು ವೇಳೆ ವಿಫಲವಾದಲ್ಲಿ ಅಂತಹ ಆಡಳಿತ ಮಂಡಳಿಗೆ ನೋಟೀಸ್ ನೀಡಿ, ಸದರಿ ನೋಟೀಸ್ ಸ್ವೀಕರಿಸಿದ ದಿನಾಂಕದಿಂದ 02 ವಾರಗಳೊಳಗೆ ಆಡಳಿತ ಮಂಡಳಿಗಳು ಪ್ರಸ್ತಾವನೆ ಸಲ್ಲಿಸಲು ಅವಕಾಶವಿರುತ್ತದೆ. ಈ ಅವಧಿಯ ನಂತರವೂ ಆಡಳಿತ ಮಂಡಳಿಗಳು ಪ್ರಸ್ತಾವನೆಗಳನ್ನು ಸಲ್ಲಿಸಲು ವಿಫಲವಾದಲ್ಲಿ ಅಂತಹ ಶಾಲೆಗಳ ನೋಂದಣಿಯನ್ನು ಹಿಂಪಡೆಯಲು ಕ್ರಮವಹಿಸುವಂತೆ ಸೂಚಿಸಲಾಗಿದೆ.<br>•ಅದರಂತೆ, 2023-24ನೇ ಸಾಲಿಗೆ ಸುತ್ತೋಲೆ ಸಂಖ್ಯೆ:DPI-CPO07(3)(USM)/55/2023 E-1135109, ದಿನಾಂಕ:15.07.2023 ರಂತೆ ಎಲ್ಲಾ ಅನುದಾನಿತ ಮತ್ತು ಅನುದಾನರಹಿತ ಖಾಸಗಿ |
| ಆ) | ಈ ನಿಟ್ಟಿನಲ್ಲಿ ಅನುದಾನರಹಿತ ಖಾಸಗಿ ಶಾಲೆಗಳ ಸೂಕ್ತ ಸಮಯಕ್ಕೆ ನವೀಕರಣಗೊಳಿಸಲು ಆ ಮೂಲಕ ವಿದ್ಯಾರ್ಥಿಗಳ ಹಿತ ಕಾಯಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ಒದಗಿಸುವುದು) | |

| | | |
|---|---|---|
| | | ಶಾಲೆಗಳು ದಿನಾಂಕ:17.07.2023 ರಿಂದ 11.09.2023 ರೊಳಗಾಗಿ ಕಡ್ಡಾಯವಾಗಿ ಆನ್‌ಲೈನ್ ಮೂಲಕ ತಂತ್ರಾಂಶದಲ್ಲಿ ಅಗತ್ಯ ಮಾಹಿತಿ ಮತ್ತು ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ಮಾನ್ಯತೆಯನ್ನು ನವೀಕರಿಸಿಕೊಳ್ಳಲು ಸೂಚನೆಗಳನ್ನು ನೀಡಿ ಸುತ್ತೋಲೆ ಹೊರಡಿಸಲಾಗಿದೆ.<br>• ಆದಾಗ್ಯೂ, ನಿಗದಿತ ಅವಧಿಯಲ್ಲಿ ಮಾನ್ಯತೆ ನವೀಕರಿಸಿಕೊಳ್ಳಲು ಅರ್ಜಿ ಸಲ್ಲಿಸಲು ವಿಫಲರಾದ ಅನುದಾನರಹಿತ ಶಾಲೆಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ದಿನಾಂಕ:04.10.2023, ದಿನಾಂಕ:20.11.2023, ದಿನಾಂಕ:01.12.2023, ದಿನಾಂಕ:09.01.2024, ದಿನಾಂಕ:19.01.2024 ಮತ್ತು ದಿನಾಂಕ:06.02.2024ರಲ್ಲಿ ಒಟ್ಟು 06 ಬಾರಿ ಸುತ್ತೋಲೆಗಳನ್ನು ಹೊರಡಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಿ ಅವಕಾಶ ನೀಡಲಾಗಿದ್ದು ಅಂತಿಮವಾಗಿ ದಿನಾಂಕ:10.02.2024ರವರೆಗೆ ಮಾನ್ಯತೆ ನವೀಕರಣಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ಇಪಿ 196 ಪಿಜಿಸಿ 2024

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು